ಸಿ.ಸಿ. ನಂಃ 1021/2021
ಪಿ.ಡಬ್ಲ್ಯೂಃ 1

ದಿನಾಂಕಃ 01-09-2022 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ನಾನು ನನ್ನ ಮುಂದುವರೆದ ಮುಖ್ಯ ವಿಚಾರಣೆ ಬದಲಾಗಿ ಸಲ್ಲಿಸಿರುವ ಪ್ರಮಾಣ ಪತದಲ್ಲಿನ ವಿಷಯಗಳೆಲ್ಲವು ಸತ್ಯವಾಗಿರುತ್ತವೆ.

*ಮುಖ್ಯ ವಿಚಾರಣೆಃ ಪಿರ್ಯಾದಿದಾರನ ಪರ ಯು. ಬಿ. ಜೆ. ವಕೀಲರಿಂದಃ*

ಚೆಕ್ಕನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ನಿಪಿ-1 ರಲ್ಲಿ ಆರೋಪಿ ಸಹಿ ಮಾಡಿರುತ್ತಾನೆ ಎಂದು ಸಾಕ್ಷಿ ಸದರಿ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಎಸ್. ಬಿ. ಐ. ಬ್ಯಾಂಕಿನ ಹಿಂಬರಹವನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ-2 ಎಂದು ಗುರುತಿಸಲಾಯಿತು. ಎಸ್. ಬಿ. ಐ. ನ ಪೇ ಸ್ಲಿಪ್ ನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ-3 ಎಂದು, ನೋಟಿಸಿನ ಕಚೇರಿ ಪ್ರತಿಯನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ-4 ಎಂದು, ಅಂಚೆ ರಶೀದಿಯನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ-5 ಎಂದು, ಅಂಚೆ ಸ್ವೀಕೃತಿ ಪತ್ರವನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ-6 ಎಂದು, ಅಂಚೆ ಇಲಾಖೆಯವರು ಕೊಟ್ಟ ಪತ್ರವನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ-7 ಎಂದು ಗುರುತಿಸಲಾಯಿತು.

***ಆದ್ದರಿಂದ ಆರೋಪಿಯನ್ನು ಶಿಕ್ಷಿಸಬೇಕೆಂದು ಪ್ರಾರ್ಥನೆ.***

ಪಾಟೀ ಸವಾಲುಃ ಆರೋಪಿ ಪರ ವಕೀಲರ ಕೋರಿಕೆಯ ಮೇರೆಗೆ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತ ಲೇಖನದ ಮೇಲೆ ಬೆರಳಚ್ಚು ಮಾಡಲಾಯಿತು)

ಓ ಹೆ ಕೆ ಸರಿ ಇದೆ ಎಂದು ಒಪ್ಪಿರುತ್ತಾರೆ.

ದಿನಾಂಕಃ 01-09-2022

Sd/-
ಹಿರಿಯ ಸಿ ಜೆ ಮತ್ತು ಜೆ. ಎಂ.ಎಫ್. ಸಿ,
ಹಿರೇಕೆರೂರು